## ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

ಸಿ.ಸಿ.394/2020

ಸಾಕ್ಷಿದಾರರ ಹೇಳಿಕೆಃ

| | | | | |
|---|---|---|---|---|
| ಹೆಸರು | : | ಲೋಕೇಶಪ್ಪ | CW: 7 | PW: 2 |
| ತಂದೆಯ ಹೆಸರು | : | ವೆಂಕಟೇಶಪ್ಪ | | |
| ವಯಸ್ಸು | : | 47 | | |
| ವೃತ್ತಿ | : | ವ್ಯವಸಾಯ | | |
| ವಾಸಸ್ಥಳ | : | ಮಾದಾಪುರ | | |

ದಿನಾಂಕಃ 23.09.2025 ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಭೋಧಿಸಲಾಯಿತು.

ಮುಖ್ಯವಿಚಾರಣೆಃ – ಮಾನ್ಯ ಸ.ಸ.ಅ.ರವರಿಂದಃ–

ಚಾಸಾ 1 ಮತ್ತು 8 ರವರು ಗೊತ್ತಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಏನು ಗೊತ್ತಿಲ್ಲ, ನನ್ನ ಸಮಕ್ಷಮ ಯಾವುದೇ ಪಂಚನಾಮೆ ಜರುಗಿಸಿಲ್ಲ. ಯಾವುದೇ ವಾಹನಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ.

ಪೋಲೀಸರ ಕೋರಿಕೆಯ ಮೇರೆಗೆ ಕೆಲವು ದಾಖಲೆಗಳಿಗೆ ನಾನು ಸಹಿಯನ್ನು ಮಾಡಿರುತ್ತೇನೆ ಆದರೆ ಅದರಲ್ಲಿ ಏನು ಬರೆದಿದೆ ಎನ್ನುವ ವಿಚಾರ ನನಗೆ ಗೊತ್ತಿಲ್ಲ. ಸಾಕ್ಷಿಯು ನಿಪಿ 4 ರಿಂದ 6, 8 ಮತ್ತು 9 ಛಾಯಾಚಿತ್ರಗಳಲ್ಲಿ ತಾನು ಇರುವ ಬಗ್ಗೆ ನೋಡಿ ಗುರುತಿಸಿದ್ದು ಅದನ್ನು ಯಾವ ಕಾರಣಕ್ಕೆ ತೆಗೆದಿರುತ್ತಾರೆ ಎಂದು ಗೊತ್ತಿಲ್ಲ ಎಂದು ನುಡಿಯುತ್ತಾರೆ. ಈ ಪ್ರಕರಣದ ಸಂಬಂಧ ನಾನು ಪೋಲೀಸರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

ಸಾಕ್ಷಿಯು ನಿಪಿ 2 ಸ್ಥಳ ಪಂಚನಾಮೆ, ನಿಪಿ 3 ಕಚ್ಚಾ ನಕಾಶೆ, ನಿಪಿ 7 ವಾಹನ ಪಂಚನಾಮೆಗಳಲ್ಲಿ ತನ್ನ ಸಹಿಗಳನ್ನು ನೋಡಿ ಗುರುತಿಸಿದ್ದು ಸಾಕ್ಷಿಯ ಸಹಿಗಳನ್ನು ನಿಪಿ 2(ಬಿ), 3(ಬಿ) ಮತ್ತು 7(ಬಿ) ಎಂದು ಗುರುತಿಸಲಾಯಿತು.

(ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ ರವರು ಅನುಮತಿ ಕೋರಿದ್ದಾರೆ. ಸೂಕ್ತ ಕಾರಣ ನೀಡಿದ ಮೇರೆಗೆ ಅನುಮತಿ ನೀಡಲಾಗಿದೆ.)

ಪಾಟೀ ಸವಾಲುಃ ಮಾನ್ಯ ಸ.ಸ.ಅ.ರವರಿಂದಃ-

ದಿಃ 11.11.2019 ರಂದು ಪೊಲೀಸರು ನನ್ನ, ಚಾಸಾ 1 ಮತ್ತು 8 ರವರ ಸಮಕ್ಷಮ ಅಪಘಾತ ಸ್ಥಳದಲ್ಲಿ ಮಧ್ಯಾಹ್ನ 3.30 ರಿಂದ 4.30 ರ ಸಮಯದಲ್ಲಿ ನಿಪಿ 2 ರಂತೆ ಸ್ಥಳ ಪಂಚನಾಮೆ ಜರುಗಿಸಿ, ನಿಪಿ ರಂತೆ ಕಚ್ಚಾ ನಕಾಶೆಯನ್ನು ತಯಾರಿಸಿ, ನಿಪಿ 4 ರಿಂದ 6 ರಂತೆ ಪೋಟೋಗಳನ್ನು ತಯಾರಿಸಿರುತ್ತಾರೆ ಎಂದರೆ ಸರಿಯಲ್ಲ. ಅದೇ ದಿನ ನಮ್ಮಗಳ ಸಮಕ್ಷಮ ಸವಳಂಗ ಪೋಲೀಸ್ ಉಪಠಾಣಾ ಆವರಣದಲ್ಲಿ ಸಂಜೆ 5 ರಿಂದ 6 ಗಂಟೆಸ ಮಯದಲ್ಲಿ ನಿಪಿ 7 ರಂತೆ ವಾಹನ ಪಂಚನಾಮೆ ಜರುಗಿಸಿ , ನಿಪಿ 8 ಮತ್ತು 9 ರಂತೆ ಪೋಟೋಗಳನ್ನು ತೆಗೆದು ಕೆಎ 15 6864 ನಂಬರ್ ನ ಬಸ್ ನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಈ ಸಂಬಂಧ ನಾನು ಪೋಲೀಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಒಪ್ಪದ ಹೇಳಿಕೆಯನ್ನು ನಿಪಿ 12 ಎಂದು ಗುರುತಿಸಲಾಯಿತು.

ಎಲ್ಲಾ ವಿಚಾರಗಳು ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀ ಸವಾಲುಃ- ಆರೋಪಿ ಪರ ವಕೀಲರಿಂದಃ-

ಆರೋಪಿ ಪರ ವಕೀಲರು ಪಾಟೀ ಸವಾಲು ಏನು ಇಲ್ಲ ಎಂದು ತಿಳಿಸಿದ ಮೇರೆಗೆ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.